**1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :**

1. ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು 2003–04ನೇ ಸಾಲಿನ ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿ.
2. ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ 2003–04ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪತ್ರಗಳ ವರದಿಗಳನ್ನು ಮಂಡಿಸುತ್ತೇನೆ.

XVII ಹೆಚ್.ಡಿ. ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು) (ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಪರವಾಗಿ)

**1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :**

1. ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತದ 2003–04ನೇ ಸಾಲಿನ ವಾಷಿಕ ವರದಿ ಮತ್ತು ವಾರ್ಷಿಕ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

XVIII ಶ್ರೀ ಹೆಚ್.ಡಿ. ರೇವಣ್ಣ(ಲೋಕೋಪಯೋಗಿ ಮತ್ತು ಇಂಧನ ಸಚಿವರು) (ವಸತಿ ಸಚಿವರ ಪರವಾಗಿ)

**1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :**

1. ರಾಜೀವ್‌ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತದ 2003–04ನೇ ಸಾಲಿನ ವಾರ್ಷಿಕ ಮತ್ತು ಲೆಕ್ಕಪರಿಶೋಧನ ವರದಿ.

**1973ರ ಕರ್ನಾಟಕ ಕೊಳಚೆ ನಿರ್ಮೂಲನ ಮಂಡಳಿ ಅಧಿನಿಯಮ 19(3)ರ ಮೇರೆಗೆ:**

1. ಕರ್ನಾಟಕ ಕೊಳಚೆ ನಿರ್ಮೂಲನಾ ಮಂಡಳಿ, ಬೆಂಗಳೂರು 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿಯನ್ನು ಮಂಡಿಸುತ್ತೇನೆ.

**ಅಧ್ಯಕ್ಷರು** : ಎಲ್ಲಾ ಕಾಗದ ಪತ್ರಗಳನ್ನು ಮಂಡಿಸಲಾಯಿತು.

## 6. ಅರ್ಜಿಗಳನ್ನೊಪ್ಪಿಸುವುದು

**ಶ್ರೀ ಕೆ. ಪ್ರಭಾಕರ ಬಂಗೇರ(ಬೆಳ್ತಂಗಡಿ)** : ಮಾನ್ಯ ಅಧ್ಯಕ್ಷರೇ, ಬೆಳ್ತಂಗಡಿ ನಿಡಿಗಲ್‌ನಲ್ಲಿ ಹರಿಯುತ್ತಿರುವ ನೇತ್ರಾವತಿ ನದಿಗೆ ನೀರಾವರಿ ಅಣೆಕಟ್ಟು ಕಟ್ಟುವ ಬಗೆಗಿನ ಅರ್ಜಿಯನ್ನು ಸದನಕ್ಕೊಪ್ಪಿಸುತ್ತಿದ್ದೇನೆ.

**ಅಧ್ಯಕ್ಷರು** : ಒಪ್ಪಿಸಲಾಯಿತು. ಶ್ರೀ ಶಶಿಕಾಂತ್ ಅಕ್ಕಪ್ಪ ನಾಯ್ಕ್‌ರವರ ಬೆಂಗಳೂರು ಪೂರ್ವ ತಾಲ್ಲೂಕು ಕೆ.ಆರ್. ಪುರಂ ಹೋಬಳಿ, ಕೊತ್ತನೂರು ಗ್ರಾಮದ ಸರ್ವೆ ನಂ. 47ರ ಜಮೀನನ್ನು ಸಾಗುವಳಿ ಮಾಡುತ್ತಿರುವವರಿಗೆ ಮಂಜೂರು ಮಾಡುವ ಬಗೆಗಿನ ಅರ್ಜಿಯನ್ನು ಅವರ ಪರವಾಗಿ ನಾನೇ ಸದನಕ್ಕೆ ಒಪ್ಪಿಸುತ್ತಿದ್ದೇನೆ.

## 7 ಗಮನ ಸೆಳೆಯುವ ಸೂಚನೆಗಳು

**ಅ) ವಿಷಯ : ಹುಬ್ಬಳ್ಳಿ–ಧಾರವಾಡ ನಗರಗಳಲ್ಲಿ ಕುಡಿಯುವ ನೀರಿನ ತೊಂದರೆಯಿಂದ ಉದ್ಭವಿಸಿರುವ ಪರಿಸ್ಥಿತಿಯ ಬಗ್ಗೆ.**

**ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ–ಗ್ರಾಮೀಣ)** : ಮಾನ್ಯ ಅಧ್ಯಕ್ಷರೆ, ಹುಬ್ಬಳ್ಳಿ–ಧಾರವಾಡ ನಗರಗಳಲ್ಲಿ ಕುಡಿಯುವ ನೀರಿನ ತೊಂದರೆಯಿಂದ ಉದ್ಭವಿಸಿರುವ ಪರಿಸ್ಥಿತಿಯ ಬಗ್ಗೆ ಮಾನ್ಯ ಪೌರಾಡಳಿತ ಮತ್ತು ಕೆಯುಐಡಿಎಫ್‌ಸಿ ಸಚಿವರ ಗಮನ ಸೆಳೆಯುತ್ತೇನೆ.